ಆ) ಈ ಕಾಲುವೆಯ ಮೂಲ ಅಂದಾಜು ಮೊತ್ತ ಎಷ್ಟಿತ್ತು ಹಾಗೂ ಇಲ್ಲಿಯವರೆಗೆ ಖರ್ಚಾದ ಹಣವೆಷ್ಟು ;

ಇ) ಈ ಕಾಲುವೆಯ ಕಾಮಗಾರಿ ಮುಗಿಸಿ ರೈತರಿಗೆ ನೀರಾವರಿ ಸೌಲಭ್ಯ ಕಲ್ಪಿಸಲು ಇನ್ನು ಎಷ್ಟು ವರ್ಷ ಬೇಕಾಗುತ್ತದೆ ;

ಉತ್ತರ

ಅ) ಪ್ರಾರಂಭವಾದ ದಿನಾಂಕ : ೦೧-೧೦-೨೦೦೩

ಆ) ಮೂಲ ಅಂದಾಜು ಮೊತ್ತ ರೂ. ೨೦.೦೦ ಲಕ್ಷ ಇಲ್ಲಿಯವರೆಗೆ ಖರ್ಚಾಗಿರುವ ಮೊತ್ತ ರೂ. ೧೨.೮೪ ಲಕ್ಷ.

ಇ) ಈ ಕಾಲುವೆಯ ಕಾಮಗಾರಿಯನ್ನು ೨೦೦೬ನೇ ಸಾಲಿನ ಅಕ್ಟೋಬರ್ ನಲ್ಲಿ ಪೂರ್ಣಗೊಳಿಸಲಾಗಿದೆ. ಕೆರೆಯಲ್ಲಿ ನೀರು ಸಂಗ್ರಹ ಇಲ್ಲದೇ ಇರುವುದರಿಂದ ನೀರಾವರಿ ಸೌಲಭ್ಯವನ್ನು ಕಲ್ಪಿಸಲಾಗಿರುವುದಿಲ್ಲ. ಮುಂದಿನ ಮಳೆಗಾಲದಲ್ಲಿ ನೀರು ಸಂಗ್ರಹವಾದಲ್ಲಿ ನೀರಾವರಿ ಸೌಲಭ್ಯವನ್ನು ಕಲ್ಪಿಸಲಾಗುವುದು.

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : ೧೮೫೯ (೨೧೬೮)

ಸದಸ್ಯರ ಹೆಸರು : ಶ್ರೀ ಪ್ರಭಾಕರ ಬಂಗೇರ ಕೆ. (ಬೆಳ್ತಂಗಡಿ)

ಉತ್ತರಿಸುವವರು : ಶ್ರೀ ಜಗದೀಶ್ ಶೆಟ್ಟರ್ (ಕಂದಾಯ ಸಚಿವರು)

ಪ್ರಶ್ನೆ

ಅ) ಬೆಳ್ತಂಗಡಿ ತಾಲ್ಲೂಕಿನಲ್ಲಿ ಮಿನಿ ವಿಧಾನಸೌಧ ನಿರ್ಮಿಸಲು ಅವಶ್ಯವಿರುವ ಜಮೀನನ್ನು ಗುರುತಿಸಲಾಗಿದೆಯೇ ;

ಆ) ಹಾಗಿದ್ದಲ್ಲಿ, ಗುರುತಿಸಲಾದ ಜಮೀನಿನಲ್ಲಿ ಮಿನಿ ವಿಧಾನಸೌಧವನ್ನು ನಿರ್ಮಿಸಲು ೨೦೦೭-೦೮ರ ಸಾಲಿನಲ್ಲಿ ಅನುದಾನವನ್ನು ಒದಗಿಸಲಾಗಿದೆಯೇ ;

ಇ) ಕಾಮಗಾರಿಯನ್ನು ಯಾವಾಗ ಪ್ರಾರಂಭಿಸಲಾಗುವುದು?

ಉತ್ತರ

ಅ) ಹೌದು

ಆ) ೨೦೦೭-೦೮ನೇ ಸಾಲಿನ ಆಯವ್ಯಯದ ಅಪೆಂಡಿಕ್ಸ್-ಇ ಇನ್ನು ಮುದ್ರಣ ಆಗಿಲ್ಲದ ಕಾರಣ ಈ ಕಾಮಗಾರಿ ಸೇರ್ಪಡೆಯಾಗಿ ಅನುದಾನವನ್ನು ಒದಗಿಸಿರುವ ಬಗ್ಗೆ ನಿರ್ದಿಷ್ಟವಾಗಿ ತಿಳಿಸಲು ಸಾಧ್ಯವಾಗುವುದಿಲ್ಲ.

ಇ) ಸಂಪನ್ಮೂಲಗಳ ವ್ಯವಸ್ಥೆ ಆಗುತ್ತಲೆ ಮಿನಿ ವಿಧಾನಸೌಧ ನಿರ್ಮಾಣ ಮಾಡಲು ಕ್ರಮ ಜರುಗಿಸಲಾಗುವುದು.

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : ೧೮೬೦ (೨೧೬೯)

ಸದಸ್ಯರ ಹೆಸರು : ಶ್ರೀ ಪ್ರಭಾಕರ ಬಂಗೇರ ಕೆ. (ಬೆಳ್ತಂಗಡಿ)

ಉತ್ತರಿಸುವವರು : ಶ್ರೀ ಜಗದೀಶ್ ಶೆಟ್ಟರ್ (ಕಂದಾಯ ಸಚಿವರು)

ಪ್ರಶ್ನೆ

ಅ) ಬೆಳ್ತಂಗಡಿ ತಾಲ್ಲೂಕಿನ ಕಂದಾಯ ಇಲಾಖೆಯ ಗ್ರಾಮ ಕರಣೀಕರ ಹುದ್ದೆಗಳ ಸಂಖ್ಯೆ ಎಷ್ಟು ?

ಆ) ಪ್ರಸ್ತುತ ಖಾಲಿ ಇರುವ ಗ್ರಾಮ ಕರಣೀಕರ ಹುದ್ದೆಗಳು ಯಾವುವು ;

ಇ) ಖಾಲಿ ಇರುವ ಹುದ್ದೆಗಳನ್ನು ತುಂಬಲು ಶೀಘ್ರ ಕ್ರಮ ಕೈಗೊಳ್ಳಲಾಗುವುದೇ ?